ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 13 ಬಿಎಲ್‌ಡಿ 2018
ಅಡಕ: 02

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:06-10-2020.

## ಸುತ್ತೋಲೆ

**ವಿಷಯ:** ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಕೋವೀಡ್-19 ಪೆಂಡಮಿಕ್ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸುವ ಬಗ್ಗೆ.

**ಉಲ್ಲೇಖ:**
1) ಮಾನ್ಯ ಉಪಮುಖ್ಯಮಂತ್ರಿಗಳು, ಉನ್ನತ ಶಿಕ್ಷಣ, ಐಟಿ ಬಿಟಿ ಇವರ ಟಿಪ್ಪಣಿ ಸಂಖ್ಯೆ: ಉಮು/ಉಶಿ/ಐಟಿ ಬಿಟಿ/405/20, ದಿನಾಂಕ: 16/06/2020.
2) ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ ಇವರ ಪತ್ರ ದಿನಾಂಕ: 27/05/2020.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೇಲಿನ ಉಲ್ಲೇಖ(1) ರಲ್ಲಿ ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ ರವರು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿನ ವಿದ್ಯಾರ್ಥಿಗಳ ಸಮಸ್ಯೆ ಹಾಗೂ ವಿವಿಧ ಬೇಡಿಕೆಗಳನ್ನು ಪೂರೈಸಲು ಕೋರಿ ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಉಪಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರಿಗೆ ಸಲ್ಲಿಸಿರುವ ಮನವಿ ಬಗ್ಗೆ ಪರಿಶೀಲಿಸಿ ಅವಶ್ಯಕ್ರಮ ಕೈಗೊಳ್ಳಲು ಉಲ್ಲೇಖ(2) ರಲ್ಲಿ ಸೂಚಿಸಿರುತ್ತಾರೆ.

ಕೋವೀಡ್-19 ಪೆಂಡಮಿಕ್ ಹಿನ್ನೆಲೆಯಲ್ಲಿ ಅತೀ ಮುಖ್ಯವಾಗಿ ಈಗಾಗಲೇ ಕ್ವಾರಂಟೈನ್ ಕೇಂದ್ರಗಳಾಗಿ ಬಳಸಲ್ಪಟ್ಟಿರುವ ಸಂಸ್ಥೆಗಳೂ ಸೇರಿದಂತೆ ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಹಾಗೂ ವಸತಿ ನಿಲಯಗಳಲ್ಲಿ ಕೊರೋನಾ ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಬಗ್ಗೆ ಹಾಗೂ ಅದು ವಿದ್ಯಾರ್ಥಿಗಳಿಗೆ ಹರಡದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು (SOP's) ಕಡ್ಡಾಯವಾಗಿ ಅನುಸರಿಸಲು ಸಂಬಂಧಪಟ್ಟ ಸ್ಥಳೀಯ ಅಧಿಕಾರಿಗಳೊಂದಿಗೆ ಸಂವಹನ ಹಾಗೂ ಸಮನ್ವಯತೆ ಸಾಧಿಸಲು ಹಾಗೂ ಕೈಗೊಂಡ ಮುಂಜಾಗ್ರತಾ ಕ್ರಮಗಳ ಮಾಹಿತಿಯನ್ನು ಆಯುಕ್ತಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

ನಿರ್ದೇಶಕರು
ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001

**ಪ್ರತಿ**
1) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
2) ಇ-ಆಡಳಿತ ವಿಭಾಗಕ್ಕೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.

ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

File No: DTE-ADMI0ACM2/22/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:25-09-2020.

-:: ಅನಧೀಕೃತ ಟಿಪ್ಪಣಿ ::-

ವಿಷಯ: ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿನ ವಿದ್ಯಾರ್ಥಿಗಳ ಸಮಸ್ಯೆ ಕುರಿತು.

ಉಲ್ಲೇಖ: ಮಾನ್ಯ ಉಪಮುಖ್ಯಮಂತ್ರಿಗಳು, ಉನ್ನತ ಶಿಕ್ಷಣ, ಐಟಿ ಬಿಟಿ ಇವರ ಹಿಂಬರಹ ಪತ್ರ ಸಂ. ಉಮು/ಉಶಿ/ಐಟಿ ಬಿಟಿ/405/20, ದಿ:16-06-2020

-0000000-

ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್, ಕರ್ನಾಟಕ ರಾಜ್ಯ ಸಮಿತಿ ಇವರು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿನ ವಿದ್ಯಾರ್ಥಿಗಳ ಸಮಸ್ಯೆ ಕುರಿತು ಹಾಗೂ ವಿವಿಧ ಬೇಡಿಕೆಗಳನ್ನು ಪೂರೈಸಲು ಕೋರಿ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಮಾನ್ಯ ಉನ್ನತ ಶಿಕ್ಷಣ ಸಚಿವರಿಗೆ ಸಲ್ಲಿಸಿರುವ ಮನವಿ ಬಗ್ಗೆ ಪರಿಶೀಲಿಸಿ ಅವಶ್ಯಕ್ರಮ ಕೈಗೊಳ್ಳಲು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ. ಪ್ರಯುಕ್ತ, ಎ.ಐ.ಡಿ.ಎಸ್.ಓ ಇವರ ಮನವಿ ಪತ್ರದಲ್ಲಿ ಉಲ್ಲೇಖಿಸಿರುವ ಅಂಶಗಳ ಕುರಿತು ತಮ್ಮ ವಿಭಾಗಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಸಲ್ಲಿಸಲು ಉಲ್ಲೇಖಿತ ಪತ್ರವನ್ನು ಈ ಪತ್ರದೊಂದಿಗೆ ಲಗತ್ತಿಸಿ ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

ಜಂಟಿ ನಿರ್ದೇಶಕರು (ಆಡಳಿತ)

ಇವರಿಗೆ – ಜಂಟಿ ನಿರ್ದೇಶಕರ ಮುಖಾಂತರ,

1. ಡಿವಿಪಿ ವಿಭಾಗಕ್ಕೆ
2. ಕಟ್ಟಡ ವಿಭಾಗಕ್ಕೆ
3. ಪರೀಕ್ಷಾ ವಿಭಾಗಕ್ಕೆ
4. ಸಿಡಿಸಿ ವಿಭಾಗಕ್ಕೆ
5. ವಿದ್ಯಾರ್ಥಿವೇತನ ವಿಭಾಗಕ್ಕೆ

ACM.

E.no- 1430889/2020
17/06/2020

ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್

**All India Democratic Students' Organisation**

**Karnataka State Committee**

No:31, 3rd Cross, Malleswaram, Bangalore-560 003 Phone: 8861028159/ 080-23561443

Date 16/6/20

ಇವರಿಂದ,ದಿನಾಂಕ: 27-5-2020 /27/05/2020

ಎಐಡಿಎಸ್ಓ, ರಾಜ್ಯ ಸಮಿತಿ

ಕರ್ನಾಟಕ

ಅಪರ ಮುಖ್ಯ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು

ಈ ಬಗ್ಗೆ ಪರಿಶೀಲಿಸಿ ಅವಶ್ಯ ಕ್ರಮ ಕೈಗೊಳ್ಳುವುದು.

1685952/2020

ಡಾ. ಅಶ್ವತ್ಥ ನಾರಾಯಣ ಸಿ.ಎನ್.
ಉಪ ಮುಖ್ಯಮಂತ್ರಿಗಳು
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಇಲಾಖೆ

ಇವರಿಗೆ,

1. ಮಾನ್ಯ ಮುಖ್ಯ ಮಂತ್ರಿಗಳು
   ಕರ್ನಾಟಕ ಸರ್ಕಾರ
2. ಮಾನ್ಯ ಉನ್ನತ ಶಿಕ್ಷಣ ಸಚಿವರು,
   ಕರ್ನಾಟಕ ಸರ್ಕಾರ
3. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು,
   ಕರ್ನಾಟಕ ಸರ್ಕಾರ

ಮಾನ್ಯರೇ,

ಮನವಿ ಪತ್ರ

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿನ ವಿದ್ಯಾರ್ಥಿಗಳ ಸಮಸ್ಯೆ ಕುರಿತು

ಪ್ರಸ್ತುತ ಯಾರೊಬ್ಬರು ಊಹಿಸಲಾಗದ ಪರಿಸ್ಥಿತಿಗೆ ನಾವೆಲ್ಲಾ ಸಾಕ್ಷಿಯಾಗಿದ್ದೇವೆ. ಕೊರೋನದ ಭೀಕರತೆ ಹೆಚ್ಚುತ್ತಿದ್ದು, ಸಾವಿನ ಪ್ರಕರಣಗಳು ಪ್ರತಿದಿನ ಹೆಚ್ಚುತ್ತಲೇ ಇರುವುದು ಒಂದಡೆಯಾದರೆ, ಅನಿರೀಕ್ಷಿತ ಲಾಕ್ ಡೌನ್ ದೇಶದ ಜನರ ಅದರಲ್ಲೂ ಅತ್ಯಂತ ಕೆಳವರ್ಗದ ಜನರ ಬದುಕನ್ನು ಛಿದ್ರಗೊಳಿಸಿದೆ.ದುಡಿಮೆಯಿಲ್ಲದೇ, ಜೀವನದ ಭದ್ರತೆಯಿಲ್ಲದೆ ದೊಡ್ಡ ನಗರಗಳಿಂದ ತಮ್ಮ ಊರುಗಳಿಗೆ ವಾಪಸ್ಸು ನಡೆದುಕೊಂಡೇ ಹೋಗುತ್ತಿರುವಾಗ ರಸ್ತೆಯಲ್ಲಿ ಅಪಘಾತಕ್ಕೀಡಾಗಿ,ಸಾವನ್ನಪ್ಪುತ್ತಿರುವ ವಲಸೆ ಕಾರ್ಮಿಕರ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿದೆ.ಇಂತಹ ಪರಿಸ್ಥಿತಿಯಿಂದ ವಿದ್ಯಾರ್ಥಿ ಸಮೂಹವೇನೂ ಹೊರತಾಗಿಲ್ಲ. ಶೈಕ್ಷಣಿಕ ವರ್ಷ ಪ್ರಾರಂಭವಾಗುತ್ತಿರುವಹಿನ್ನಲೆಯಲ್ಲಿ ಪ್ರಾಥಮಿಕ ಶಿಕ್ಷಣದಿಂದ ಹಿಡಿದು ಉನ್ನತ ಶಿಕ್ಷಣದವರೆಗೂ ಈಗ ಅನೇಕ ಸವಾಲುಗಳು ಎದುರಾಗುತ್ತಿವೆ.ಹಾಗೂ ಬಡ-ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ, ಶಾಲಾ ಕಾಲೇಜುಗಳ ಶುಲ್ಕ, ಸಾರಿಗೆ ವ್ಯವಸ್ಥೆ, ಹಾಸ್ಟೆಲ್‌ಗಳ ಮೂಲ ಸೌಕರ್ಯಗಳಿಗೆ ಸಂಬಂಧಿಸಿದಂತೆ ಅನೇಕ ಶೈಕ್ಷಣಿಕ ಸಮಸ್ಯೆಗಳು ಎದುರಾಗುತ್ತಿವೆ.

ಈ ನಿಟ್ಟಿನಲ್ಲಿ ಶಿಕ್ಷಣದ ಗುಣಮಟ್ಟ ಕಾಪಾಡುವಂತೆ ಮತ್ತು ವಿದ್ಯಾರ್ಥಿ ಪರವಾದ ಕ್ರಮಗಳನ್ನು ಕೈಗೊಳ್ಳುವಂತೆ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯುಸರ್ಕಾರವನ್ನು ಆಗ್ರಹಿಸುತ್ತದೆ. ಕರ್ನಾಟಕದ ಬಹುತೇಕ ವಿದ್ಯಾರ್ಥಿಗಳು,ದಿನಗೂಲಿಗಾಗಿ ದುಡಿಯುವ ರೈತ – ಕೂಲಿ ಕಾರ್ಮಿಕರ ಮಕ್ಕಳು. ದುಡಿದು ಸಂಪಾದಿಸಲುಕೆಲಸವಿಲ್ಲದೇ ಎರಡು ಹೊತ್ತಿನ ಊಟಕ್ಕೂ ಪರದಾಡುವ ಪರಿಸ್ಥಿತಿ ಇರುವಾಗ ತಮ್ಮ ಮಕ್ಕಳ ಶಾಲಾ ಕಾಲೇಜುಗಳ ಶುಲ್ಕವನ್ನು ಭರಿಸುವುದು ಅಸಾಧ್ಯವಾಗಿದೆ. ಇದರಿಂದಾಗಿ ಸಹಸ್ರಾರು ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಲಿದ್ದಾರೆ. ಲಾಕ್‌ಡೌನ್ ಮುಂದುವರೆಯುತ್ತಿರುವ, ಪರಿಸ್ಥಿತಿಯಲ್ಲೇ ಕೆಲವು ಸರ್ಕಾರಿ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳು ಪರೀಕ್ಷಾ ಶುಲ್ಕವನ್ನು ವಿದ್ಯಾರ್ಥಿಗಳಿಂದ ಭರಿಸಿಕೊಳ್ಳುತ್ತಿರುವುದು ಅತ್ಯಂತ ಅಪ್ರಜಾತಾಂತ್ರಿಕನಡೆಯಾಗಿದೆ. ಈ ಕೂಡಲೇ ಎಲ್ಲಾ ವಿಶ್ವ ವಿದ್ಯಾಲಯಗಳು ಈ ಪ್ರಕ್ರಿಯೆಯನ್ನು ಹಿಂಪಡೆಯಬೇಕೆಂದು ಹಾಗೂ ಪ್ರಸಕ್ತ ಸಾಲಿನ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲಾ ಕಾಲೇಜುಗಳ ಪರೀಕ್ಷಾ ಶುಲ್ಕ ಹಾಗೂ ಪ್ರವೇಶಾತಿ ಶುಲ್ಕವನ್ನು ಸರ್ಕಾರವೇ ಭರಿಸಬೇಕೆಂದು ಎಐಡಿಎಸ್‌ಓ ಆಗ್ರಹಿಸುತ್ತದೆ. ಅಲ್ಲದೇ ಕಳೆದ ಎರಡು ತಿಂಗಳ ಕಾಲ ಅನೇಕ ಕಾಲೇಜುಗಳು ಕೈಗೊಂಡ ಆನ್‌ಲೈನ್ ಪಾಠಗಳು ಬಹುಪಾಲು

18/6/2020

19/6/2020

ವಿದ್ಯಾರ್ಥಿಗಳನ್ನು ತಲುಪಲು ಸಾಧ್ಯವಾಗಿಲ್ಲ. ರಾಜ್ಯದ ಬಹುತೇಕ ವಿದ್ಯಾರ್ಥಿಗಳು ಕನಿಷ್ಟ ವಿದ್ಯುತ್ ಶಕ್ತಿಯೂ ಸರಿಯಾಗಿ ಪೂರೈಕೆಯಾಗದಹಳ್ಳಿಗಳಲ್ಲಿದ್ದಾರೆ. ಇಂತಹ ಅಸಮಾನತೆಯಿರುವ ಈ ದೇಶದಲ್ಲಿ ಆನ್‌ಲೈನ್ ಪಾಠಗಳು ಶಿಕ್ಷಣ ನೀಡುವ ಅತ್ಯಂತ ಅಪ್ರಜಾತಾಂತ್ರಿಕ ಮಾರ್ಗವಾಗಿದೆಯೆಂಬುದು ಅನೇಕ ಶಿಕ್ಷಣ ತಜ್ಞರ ಅಭಿಪ್ರಾಯವಾಗಿದೆ. ಈ ಪಾಠಗಳ ಆಧಾರದ ಮೇಲೆ ಪರೀಕ್ಷೆ ನಡೆಸಿದ್ದಲ್ಲಿ ರಾಜ್ಯದ ಅತೀ ದೊಡ್ಡ ಸಂಖ್ಯೆಯ ವಿದ್ಯಾರ್ಥಿಗಳು ಅನ್ಯಾಯಕ್ಕೆ ಒಳಗಾಗುತ್ತಾರೆ. ಪರೀಕ್ಷೆ ನಡೆಸಬೇಕಾದಲ್ಲಿ ಪರೀಕ್ಷೆಯ ರೂಪುರೇಷೆಯನ್ನು ಶಿಕ್ಷಣ ತಜ್ಞರು ಹಾಗೂ ಶಿಕ್ಷಕರು ಮತ್ತು ವಿದ್ಯಾರ್ಥಿಗಳೊಂದಿಗೆ ಚರ್ಚಿಸಿ,ಪ್ರಜಾತಾಂತ್ರಿಕವಾಗಿ ರೂಪಿಸಬೇಕೆಂದು ಎಐಡಿಎಸ್‌ಓ ಪ್ರಸ್ತಾಪಿಸುತ್ತದೆ.

ಪ್ರಸಕ್ತ ವರ್ಷದಲ್ಲಿ ಯೋಜನಾ ರಹಿತ ಲಾಕ್‌ಡೌನ್ ನ ಪರಿಣಾಮವಾಗಿ ಶಿಕ್ಷಣದಿಂದ ಸಹಸ್ರಾರು ವಿದ್ಯಾರ್ಥಿಗಳು ವಂಚಿತರಾಗುವ ಎಲ್ಲಾ ಸಂಭವವಿದೆ. ಆದ ಕಾರಣ ಸರ್ಕಾರವು ಈ ವರ್ಷ ಹಾಸ್ಟೆಲ್‌ವಿದ್ಯಾರ್ಥಿಗಳನ್ನೂ ಒಳಪಟ್ಟು ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೆ ಶಿಷ್ಯ ವೇತನವನ್ನು ವಿಸ್ತರಿಸಬೇಕು ಹಾಗೂ ವೇತನದ ಮೊತ್ತವನ್ನು ಹೆಚ್ಚಿಸಬೇಕಾಗಿಎಐಡಿಎಸ್‌ಓ ಮನವಿ ಮಾಡುತ್ತದೆ. ಬಡ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗದಂತೆ ವಿದ್ಯಾರ್ಥಿಗಳಿಗಾಗಿ ಸರ್ಕಾರವು ವಿಶೇಷ ಆರ್ಥಿಕ ಪ್ಯಾಕೇಜ್ ಘೋಷಿಸಬೇಕು. ಮತ್ತು ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡಬೇಕೆಂದು ಎಐಡಿಎಸ್‌ಓ ಸರ್ಕಾರಕ್ಕೆ ಮನವಿ ಮಾಡುತ್ತದೆ.

ಅತೀ ಮುಖ್ಯವಾಗಿ ಈಗಾಗಲೇ ಕ್ವಾರಂಟೈನ್ ಕೇಂದ್ರಗಳಾಗಿ ಬಳಸಲ್ಪಟ್ಟಿರುವ ಶಾಲಾ, ಕಾಲೇಜು, ಹಾಸ್ಟೆಲ್ ಆವರಣಗಳನ್ನು ಸೇರಿದಂತೆ ರಾಜ್ಯದ ಎಲ್ಲಾ ಶಾಲಾ ಕಾಲೇಜು ಆವರಣಗಳನ್ನು ಶುದ್ಧಗೊಳಿಸುವ ಕಾರ್ಯ ಕೈಗೆತ್ತಿಕೊಳ್ಳುವುದು ಅವಶ್ಯವಾಗಿದೆ. ಹಾಗೂ ಸಂಪೂರ್ಣವಾಗಿ ಶುದ್ಧೀಕರಿಸಿ ಸ್ಯಾನಿಟೈಸ್ ಮಾಡಿದ ನಂತರವೇ ವಿದ್ಯಾರ್ಥಿಗಳಿಗೆ ಶಾಲಾ, ಕಾಲೇಜು, ಹಾಸ್ಟೆಲ್ ಆವರಣವನ್ನು ತೆರೆಯಬೇಕೆಂದು ಎಐಡಿಎಸ್‌ಓ ಕೋರುತ್ತದೆ.

ಈ ಎಲ್ಲಾ ಬೇಡಿಕೆಗಳನ್ನು ಮಾನ್ಯ ಸರ್ಕಾರವು ಹಾಗೂ ವಿಶ್ವ ವಿದ್ಯಾಲಯಗಳು ಗಂಭೀರವಾಗಿ ಪರಿಗಣಿಸಿರಾಜ್ಯದ ಸಹಸ್ರಾರು ವಿದ್ಯಾರ್ಥಿಗಳಈ ಅವಶ್ಯಕತೆಗಳನ್ನು ಪೂರೈಸಲುಎಐಡಿಎಸ್‌ಓ ಈ ಮೂಲಕ ಒತ್ತಾಯಿಸುತ್ತದೆ.

**ಬೇಡಿಕೆಗಳು:**

1. ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲಾ–ಕಾಲೇಜುಗಳ ಶುಲ್ಕವನ್ನು ಸರ್ಕಾರವೇ ಭರಿಸಬೇಕು.
2. ವಿಶ್ವ ವಿದ್ಯಾಲಯಗಳ ಪರೀಕ್ಷಾ ಶುಲ್ಕಗಳನ್ನು ರದ್ದು ಪಡಿಸಬೇಕು. ಈಗಾಗಲೇ ಶುಲ್ಕ ಪಡೆದಲ್ಲಿ ಅದನ್ನು ವಾಪಾಸ್ಸು ಮಾಡಬೇಕು
3. ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ನೀಡಬೇಕು.
4. ಎಲ್ಲಾ ವಿದ್ಯಾರ್ಥಿಗಳ ಶಿಷ್ಯ ವೇತನವನ್ನು (ಸ್ಕಾಲರ್ಶಿಪ್) ಹೆಚ್ಚಿಸಿ ಕಡ್ಡಾಯವಾಗಿ ನೀಡಬೇಕು.
5. ಸರ್ಕಾರಿ ಹಾಸ್ಟೆಲ್‌ಗಳ ಅನುದಾನವನ್ನು ಹೆಚ್ಚಿಸಿ ಹಾಗೂ ಹಾಸ್ಟೆಲ್ ಸೌಕರ್ಯವನ್ನು ಶೈಕ್ಷಣಿಕ ವರ್ಷದ ಪ್ರಾರಂಭದಲ್ಲೇ ಒದಗಿಸಿ.
6. ಆನ್‌ಲೈನ್ ತರಗತಿಗಳ ಆಧಾರದ ಮೇಲೆ ಪರೀಕ್ಷೆ ನಡೆಸಬಾರದು. ಪರೀಕ್ಷೆಯ ರೂಪುರೇಷೆಯನ್ನು ಶಿಕ್ಷಣ ತಜ್ಞರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳೊಂದಿಗೆ ಚರ್ಚಿಸಿ ಪ್ರಜಾತಾಂತ್ರಿಕವಾಗಿ ರೂಪಿಸತಕ್ಕದ್ದು.
7. ಕ್ವಾರಂಟೈನ್ ಕೇಂದ್ರಗಳಾಗಿ ಬಳಸಿದ ಶಾಲೆ, ಕಾಲೇಜು ಹಾಗೂ ಹಾಸ್ಟೆಲ್ ಕಟ್ಟಡಗಳನ್ನು ಸಂಪೂರ್ಣವಾಗಿ ಶುದ್ಧೀಕರಿಸಿ ಸ್ಯಾನಿಟೈಸ್ ಮಾಡಿದ ನಂತರವೇ ವಿದ್ಯಾರ್ಥಿಗಳಿಗೆ ಅದನ್ನು ತೆರೆಯಬೇಕು.
8. ಇತರೆ ಕ್ಷೇತ್ರಗಳ ಕಷ್ಟದಲ್ಲಿರುವ ಜನರಿಗೂ ಸೇರಿದಂತೆ ವಿದ್ಯಾರ್ಥಿ ಸಮುದಾಯಕ್ಕೂ ವಿಶೇಷ ಆರ್ಥಿಕ ಪ್ಯಾಕೇಜ್ ಘೋಷಿಸಿ.

ಧನ್ಯವಾದಗಳೊಂದಿಗೆ

ರಾಜ್ಯ ಸಮಿತಿಯ ಪರವಾಗಿ
ರಾಜ್ಯ ಅಧ್ಯಕ್ಷರು
ಅಶ್ವಿನಿ ಕೆ.ಎಸ್

ರಾಜ್ಯ ಕಾರ್ಯದರ್ಶಿ
ಅಜಯ್ ಕಾಮತ್